# Akashvani : Bangalore
# National Bulletin In Kannada
# 19.01.2025 / 7.35 hrs

## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

## 19.01.2025 / 7.35 hrs

<><*<><>*><>

ಮುಖ್ಯಾಂಶಗಳು

1. ೧೧೮ನೇ ಆವೃತ್ತಿಯ ಮನ ಕಿ ಬಾತ್ ಕಾರ್ಯಕ್ರಮದಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ದೇಶವನ್ನುದ್ದೇಶಿಸಿ ಭಾಷಣ
2. ೨೦ನೇ ಸಂಸ್ಥಾಪನಾ ದಿನದ ಸಮಾರಂಭದಲ್ಲಿಂದು ಕೇಂದ್ರ ಸಚಿವ ಅಮಿತ್ ಶಾ ಭಾಗಿ; ೨೦೦ ಕೋಟಿಗೂ ಅಧಿಕ ಮೊತ್ತದ ಯೋಜನೆಗಳಿಗೆ ಚಾಲನೆ
3. ದೇಶದಲ್ಲಿ ಬೆಳೆಯುತ್ತಿರುವ ಒಟ್ಟು ಅಡಕೆಯಲ್ಲಿ ಕರ್ನಾಟಕದ ಪಾಲು ಗಮನಾರ್ಹ; ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್
4. ಖೋಖೋ ವಿಶ್ವಕಪ್ ಪುರುಷರ ಹಾಗೂ ಮಹಿಳಾ ತಂಡಗಳು ಫೈನಲ್ಸ್‌ಗೆ ಲಗ್ಗೆ

***************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ಮೂಲಕ ಇಂದು ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೧೮ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ.ಅಲ್ಲದೆ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮವನ್ನು ಪ್ರಸಾರವಾಗಲಿದೆ.

***************

ಜಾಫ್ನಾದಲ್ಲಿ ಭಾರತದ ನೆರವಿನಿಂದ ನಿರ್ಮಿಸಲಾದ ಐತಿಹಾಸಿಕ ಸಾಂಸ್ಕೃತಿಕ ಕೇಂದ್ರಕ್ಕೆ 'ತಿರುವಳ್ಳುವರ್ ಸಾಂಸ್ಕೃತಿಕ ಕೇಂದ್ರ' ಎಂದು ನಿನ್ನೆ ಮರು ನಾಮಕರಣ ಮಾಡಿರುವುದನ್ನು ಪ್ರಧಾನಿ ನರೇಂದ್ರ ಮೋದಿ ಸ್ವಾಗತಿಸಿದ್ದಾರೆ.ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಸಂದೇಶ ಹಂಚಿಕೊಂಡಿರುವ ಅವರು, ಇದು ಭಾರತ ಮತ್ತು ಶ್ರೀಲಂಕಾ ನಡುವಿನ ಸಾಂಸ್ಕೃತಿಕ , ಭಾಷಾ ಮತ್ತು ಐತಿಹಾಸಿಕ ಬಾಂಧವ್ಯದ ಪ್ರತೀಕವಾಗಿದೆ ಎಂದಿದ್ದಾರೆ. ಜನವರಿ ೧೫ ರಂದು ತಿರುವಳ್ಳುವರ್ ದಿನದಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ತಮಿಳು ತತ್ವಜ್ಞಾನಿ, ಕವಿ ಮತ್ತು ಚಿಂತಕ ತಿರುವಳ್ಳುವರ್ ಅವರನ್ನು ಸ್ಮರಿಸಿದ್ದಾರೆ . ಅವರ ವಚನಗಳು ತಮಿಳು ಸಂಸ್ಕೃತಿಯ ಸಾರ ಮತ್ತು ರಾಷ್ಟ್ರದ ತಾತ್ವಿಕ ಪರಂಪರೆಯನ್ನು ಪ್ರತಿಬಿಂಬಿಸುತ್ತವೆ ಎಂದು ಹೇಳಿದರು.

***************

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಆಂಧ್ರಪ್ರದೇಶದ ವಿಜಯವಾಡದಲ್ಲಿ, ರಾಷ್ಟ್ರೀಯ ವಿಪತ್ತು ಪರಿಹಾರ ದಳದ ೨೦ನೇ ಸಂಸ್ಥಾಪನಾ ದಿನದ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ವೇಳೆ ಅವರು, ೨೦೦ ಕೋಟಿ ರೂಪಾಯಿಗೂ ಅಧಿಕ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.     ಮೂರು ಪ್ರಮುಖ ಕೇಂದ್ರಗಳಾದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಸಂಸ್ಥೆಯ ದಕ್ಷಿಣ ಕ್ಯಾಂಪಸ್, ಎನ್‌ಡಿಆರ್‌ಎಫ್‌ನ ೧೦ನೇ ಬೆಟಾಲಿಯನ್ ಕೇಂದ್ರ ಮತ್ತು ಸುಪೌಲ್‌ನಲ್ಲಿ ಪ್ರಾದೇಶಿಕ ಪ್ರತಿಕ್ರಿಯಾ ಕೇಂದ್ರಗಳನ್ನು ಉದ್ಘಾಟಿಸಲಾಗುತ್ತಿದೆ.ಹೈದರಾಬಾದ್‌ನ ರಾಷ್ಟ್ರೀಯ ಪೊಲೀಸ್ ಅಕಾಡೆಮಿಯಲ್ಲಿ ಪ್ರೊಬೆಷನರಿ ಐಪಿಎಸ್ ಅಧಿಕಾರಿಗಳಿಗೆ ಶೂಟಿಂಗ್ ಕೌಶಲದ ತರಬೇತಿಗಾಗಿ ನಿರ್ಮಿಸಲಾಗುತ್ತಿರುವ ಇಂಟಿಗ್ರೇಟೆಡ್ ಇಂಡೋರ್ ಶೂಟಿಂಗ್ ರೇಂಜ್‌ಗೆ ಅಮಿತ್ ಶಾ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.ತಮ್ಮ ಭೇಟಿಯ ವೇಳೆ ಅವರು, ತಿರುಪತಿಯಲ್ಲಿ ರಾಜ್ಯ ಸರ್ಕಾರದ ಪ್ರಾದೇಶಿಕ ವಿಧಿ ವಿಜ್ಞಾನಗಳ ಪ್ರಯೋಗಾಲಯದ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ.

****************

ದೇಶದಲ್ಲಿ ಬೆಳೆಯುತ್ತಿರುವ ಒಟ್ಟು ಅಡಕೆಯಲ್ಲಿ ಕರ್ನಾಟಕದ ಪಾಲು ಗಮನಾರ್ಹವಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಶಿವಮೊಗ್ಗ ಜಿಲ್ಲೆಯ ಸಾಗರದಲ್ಲಿ ನಡೆದ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು ಕರ್ನಾಟಕದಲ್ಲಿ ಅಡಕೆಯು ಪ್ರಮುಖ ವಾಣಿಜ್ಯ ಬೆಳೆಯಾಗಿರುವುದು ಕೇಂದ್ರದ ಗಮನದಲ್ಲಿದೆ. ಈ ನಿಟ್ಟಿನಲ್ಲಿ ವಿದೇಶಗಳಿಂದ ಆಮದಾಗುತ್ತಿರುವ ಅಡಕೆಗೆ ಹೆಚ್ಚಿನ ತೆರಿಗೆ ವಿಧಿಸಲಾಗುತ್ತಿದೆ.  ಅಗತ್ಯಬಿದ್ದರೆ ಅದನ್ನು ಇನ್ನಷ್ಟು ಹೆಚ್ಚಿಸಲಾಗುವುದು. ಕಳ್ಳ ಮಾರ್ಗದಿಂದ ಬರುವ ಅಡಕೆ ತಡೆಯಲು ಮತ್ತಷ್ಟು ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು. ವಿವಿಧ ೧೬ ಸಂಸ್ಥೆಗಳ ಮೂಲಕ ಸಂಶೋಧನೆ ಕೈಗೊಂಡು ಅಡಕೆಯಿಂದ ಕ್ಯಾನ್ಸರ್ ಬರುವುದಿಲ್ಲ ಎಂಬ ಅಂಶವನ್ನು  ಮನವರಿಕೆ ಮಾಡಿಕೊಡುವ ಯತ್ನ ನಡೆದಿದೆ ಎಂದು ಭರವಸೆ ನೀಡಿದರು.

ಧ್ವನಿ: ಶಿವರಾಜ್ ಸಿಂಗ್ ಚೌಹಾಣ್

****************

ಬಿಹಾರದ ಪಾಟ್ನಾದಲ್ಲಿ ನಾಳೆ ೮೫ನೇ ಅಖಿಲ ಭಾರತ ಪೀಠಾನೇನಾಧಿಕಾರಿಗಳ ಸಮಾವೇಶ ನಡೆಯಲಿದ್ದು, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.೪೩ ವರ್ಷಗಳ ನಂತರ ಈ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಸಂವಿಧಾನದ ೭೫ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ದೇಶದ ಸಾಂವಿಧಾನಿಕ ಮೌಲ್ಯಗಳನ್ನು ಬಲಪಡಿಸುವಲ್ಲಿ, ಸಂಸತ್ತು ಮತ್ತು ರಾಜ್ಯ ವಿಧಾನಮಂಡಲದ ಕೊಡುಗೆ ವಿಷಯದ ಮೇಲೆ ನಡೆಯುವ ಕಾರ್ಯಕ್ರಮದಲ್ಲಿ ದೇಶದ ವಿವಿಧ ಭಾಗಗಳ ಶಾಸಕಾಂಗ ಸಂಸ್ಥೆಗಳ ಅಧಿಕಾರಿಗಳು ವಿಚಾರ ವಿನಿಮಯ ಮಾಡಲಿದ್ದಾರೆ.

****************

ಭಾರತದ ಬೆಳವಣಿಗೆ ದರ ಶೇಕಡ ೬.೭ ರಷ್ಟು ಇರಲಿದೆ ಎಂದು ವಿಶ್ವ ಬ್ಯಾಂಕ್ ಅಂದಾಜಿಸಿದ್ದು, ಇದು ಜಾಗತಿಕ ಬೆಳವಣಿಗೆ ದರ ಶೇಕಡ ೨.೭ನ್ನು ಮೀರಿದೆ.ಭಾರತ ಜಾಗತಿಕ ಆರ್ಥಿಕ ಭೂದೃಶ್ಯದಲ್ಲಿ ಪ್ರಾಬಲ್ಯ ಸಾಧಿಸಲಿದ್ದು,  ಮುಂದಿನ ೨ ಹಣಕಾಸು ವರ್ಷದಲ್ಲಿ ವೇಗವಾಗಿ ಬೆಳೆಯುತ್ತಿರುವ ದೊಡ್ಡ

ಆರ್ಥಿಕತೆಯಾಗಿ ಮುಂದುವರೆಯಲಿದೆ ಎಂದು ವಿಶ್ವಬ್ಯಾಂಕ್‌ನ ಜನವರಿ-೨೦೨೫ರ ಜಾಗತಿಕ ಆರ್ಥಿಕ ನಿರೀಕ್ಷೆಗಳು - ಜಿಇಪಿ ವರದಿ ತಿಳಿಸಿದೆ.

***************

ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಇಂದು ಸ್ವಿಟ್ಜರ್ಲೆಂಡ್‌ನ ದಾವೋಸ್‌ನಲ್ಲಿ ನಡೆಯಲಿರುವ ವಿಶ್ವ ಆರ್ಥಿಕ ವೇದಿಕೆಯಲ್ಲಿ ಭಾಗವಹಿಸಲಿದ್ದಾರೆ. ಆಂಧ್ರಪ್ರದೇಶದಲ್ಲಿ ಸಂಭಾವ್ಯ ಹೂಡಿಕೆಗಳಿಗಾಗಿ ಜಾಗತಿಕ ವ್ಯಾಪಾರ ನಾಯಕರು ಮತ್ತು ಕೈಗಾರಿಕೋದ್ಯಮಿಗಳನ್ನು ಆಕರ್ಷಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ.ಗೂಗಲ್ ಸೇರಿದಂತೆ ಪ್ರತಿಷ್ಠಿತ ಸಂಸ್ಥೆಗಳು ಆಂಧ್ರಪ್ರದೇಶದಲ್ಲಿ ಹೂಡಿಕೆ ಮಾಡಲು ಈಗಾಗಲೇ ಒಪ್ಪಂದಗಳಿಗೆ ಸಹಿ ಹಾಕಿವೆ. ನಾಳೆ ಚಂದ್ರಬಾಬು ನಾಯ್ಡು ರವರು ಜ್ಯೂರಿಚ್‌ನಲ್ಲಿ, ಸ್ವಿಟ್ಜರ್‌ಲ್ಯಾಂಡ್‌ನ ಭಾರತದ ರಾಯಭಾರಿಯನ್ನು ಭೇಟಿಯಾಗಲಿದ್ದಾರೆ.ನಾಲ್ಕು ದಿನಗಳ ವಿಶ್ವ ಆರ್ಥಿಕ ವೇದಿಕೆಯ ಕಾರ್ಯಕ್ರಮದಲ್ಲಿ, ನಾಯ್ಡು ಅವರು ಹಸಿರು ಹೈಡ್ರೋಜನ್ ಕುರಿತು ಚರ್ಚೆಯಲ್ಲಿ ಭಾಗವಹಿಸಲಿದ್ದಾರೆ.

***************

ಭಾರತದ ರಾಷ್ಟ್ರೀಯ **ಅಂತರ್ಜಾಲ** ವಿನಿಮಯ ಕೇಂದ್ರವು, **ಅಂತರ್ಜಾಲ** ಆಡಳಿತ ಇಂಟರ್ನ್‌ಶಿಪ್ ಮತ್ತು ಸಾಮರ್ಥ್ಯ ನಿರ್ಮಾಣ ಯೋಜನೆಯನ್ನು ಪ್ರಾರಂಭಿಸುವುದಾಗಿ ಘೋಷಿಸಿದೆ. ಈ ಕಾರ್ಯಕ್ರಮವು ಎರಡು ಹಂತಗಳಲ್ಲಿ; ಆರು ತಿಂಗಳು ಹಾಗೂ ಮೂರು ತಿಂಗಳ ದ್ವೈವಾರ್ಷಿಕ ಇಂಟರ್ನ್‌ಶಿಪ್ ಒದಗಿಸುತ್ತದೆ. ಇದರಲ್ಲಿ ಪಾಲ್ಗೊಳ್ಳುವ ಪ್ರತಿಯೊಬ್ಬರಿಗೂ ಅಂತಾರಾಷ್ಟ್ರೀಯ ಸಂಸ್ಥೆಗಳ ವಿಷಯ ತಜ್ಞರು, ಉನ್ನತ ಶ್ರೇಣಿಯ ನಿವೃತ್ತ ಸರ್ಕಾರಿ ಅಧಿಕಾರಿಗಳು ಮತ್ತು ಮಾನ್ಯತೆ ಪಡೆದ ಸಂಸ್ಥೆಗಳ ಸಲಹೆಗಾರರಿಂದ ಮಾರ್ಗದರ್ಶನ ನೀಡಲಾಗುತ್ತದೆ. ಅಲ್ಲದೇ, ಇಂಟರ್ನ್‌ಗಳಿಗೆ ತಿಂಗಳಿಗೆ ೨೦ ಸಾವಿರ ರೂಪಾಯಿಗಳ ಶಿಷ್ಯವೇತನ ಸಹ ನೀಡಲಾಗುವುದು ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ತಿಳಿಸಿದೆ. ಅಭ್ಯರ್ಥಿಗಳು, ಭಾರತದ ರಾಷ್ಟ್ರೀಯ ಇಂಟರ್ನೆಟ್ ವಿನಿಮಯ ಕೇಂದ್ರದ ಅಧಿಕೃತ ಜಾಲತಾಣದ ಮೂಲಕ ಇಂಟರ್ನ್‌ಶಿಪ್‌ಗೆ ಅರ್ಜಿ ಸಲ್ಲಿಸಬಹುದು.

***************

ಕೋಲ್ಕತ್ತಾದ ಆರ್.ಜಿ.ಕರ್ ವೈದ್ಯಕೀಯ ಕಾಲೇಜಿನ ವೈದ್ಯಕೀಯ ವಿದ್ಯಾರ್ಥಿನಿಯ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆ ಪ್ರಕರಣದಲ್ಲಿ ಸಂಜಯ್ ರೈ ಎಂಬಾತನನ್ನು ತಪ್ಪಿತಸ್ಥ ಎಂದು ಪಶ್ಚಿಮ ಬಂಗಾಳದ ಸಿಲ್ದಾ ನ್ಯಾಯಾಲಯವು ನಿನ್ನೆ ತೀರ್ಪು ನೀಡಿದೆ.ನಾಳೆ ಮುಂದಿನ ವಿಚಾರಣೆಯ ಸಮಯದಲ್ಲಿ ನ್ಯಾಯಾಲಯವು, ಅಪರಾಧಿಗೆ ಶಿಕ್ಷೆಯ ಪ್ರಮಾಣವನ್ನು ಪ್ರಕಟಿಸಬಹುದು ಎಂದು ನಿರೀಕ್ಷಿಸಲಾಗಿದೆ.ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ, ಸಲ್ಲಿಸಿದ ಪುರಾವೆಗಳು ಸಂಜಯ್ ರೈ ತಪ್ಪಿತಸ್ಥನೆಂದು ಸಾಬೀತುಪಡಿಸುತ್ತದೆ ಎಂದು ನ್ಯಾಯಾಧೀಶರು ತಿಳಿಸಿದ್ದಾರೆ.

***************

ಅಪರಾಧ ತನಿಖೆಗಳಲ್ಲಿ ಸೈಬರ್ ಬೆದರಿಕೆ ಮತ್ತು ಡಿಜಿಟಲ್ ವಿಧಿ ವಿಜ್ಞಾನ ಕುರಿತು ಮಾಹಿತಿಯನ್ನು ಪರಸ್ಪರ ಹಂಚಿಕೆಗಾಗಿ ಭಾರತ ಹಾಗೂ ಅಮೆರಿಕ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿವೆ. ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಅಮೆರಿಕದಲ್ಲಿನ ಭಾರತದ ರಾಯಭಾರಿ ವಿನಯ್

ಮೋಹನ್ ಕ್ವಾತ್ರಾ ಮತ್ತು ಅಮೆರಿಕದ ಗೃಹ ಇಲಾಖೆಯ ಉಪ ಕಾರ್ಯದರ್ಶಿ ಕ್ರಿಸ್ಟಿ ಕ್ಯಾನೆಗಲ್ಲೊ ಈ ಒಪ್ಪಂದಕ್ಕೆ ಸಹಿ ಹಾಕಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

****************

ನವದೆಹಲಿಯ ಇಂದಿರಾಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಖೋಖೋ ವಿಶ್ವಕಪ್ ೨೦೨೫ರಲ್ಲಿ ಭಾರತದ ಪುರುಷರ ಹಾಗೂ ಮಹಿಳಾ ತಂಡಗಳು ಫೈನಲ್ಸ್ ಪ್ರವೇಶಿಸಿದೆ.ನಿನ್ನೆ ನಡೆದ ಸೆಮಿಫೈನಲ್‌ನಲ್ಲಿ ಭಾರತದ ಪುರುಷರ ತಂಡ ಸೌತ್ ಆಫ್ರಿಕಾ ತಂಡದ ವಿರುದ್ಧ ೬೨-೪೨ ಅಂಕಗಳ ಅಂತರದಲ್ಲಿ ಜಯಸಾಧಿಸಿ ಫೈನಲ್ ಪ್ರವೇಶಿಸಿದೆ.ಇದಕ್ಕೂ ಮುನ್ನಾ ನಡೆದ ಮಹಿಳೆಯರ ಸೆಮಿಫೈನಲ್‌ನಲ್ಲಿ ಭಾರತದ ವನಿತೆಯರ ತಂಡ ಸೌತ್ ಆಫ್ರಿಕಾ ವಿರುದ್ಧ ೬೬-೧೬ ಅಂತರದಲ್ಲಿ ಗೆಲುವು ಸಾಧಿಸಿದೆ.

****************

ಪ್ರಧಾನಿ ನರೇಂದ್ರ ಮೋದಿ ಅವರು, ನಿನ್ನೆ 'ಸ್ವಾಮಿತ್ವ' ಯೋಜನೆಯಡಿ ೬೫ ಲಕ್ಷಕ್ಕೂ ಹೆಚ್ಚು ಆಸ್ತಿಕಾರ್ಡ್‌ಗಳನ್ನು ಆಸ್ತಿ ಮಾಲೀಕರಿಗೆ ವೀಡಿಯೋ ಕಾನ್ಫರೆನ್ಸ್ ಮೂಲಕ ವಿತರಿಸಿದರು.ಹತ್ತು ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳಲ್ಲಿನ ೫೦ ಸಾವಿರಕ್ಕೂ ಹೆಚ್ಚು ಹಳ್ಳಿಗಳಲ್ಲಿ ಆಸ್ತಿಕಾರ್ಡ್‌ಗಳನ್ನು ವಿತರಿಸಲಾಗಿದೆ.'ಸ್ವಾಮಿತ್ವ' ಯೋಜನೆಯು, ಗ್ರಾಮಗಳಲ್ಲಿರುವ ಆಸ್ತಿ ಮಾಲೀಕರಿಗೆ ಹಕ್ಕುಗಳ ದಾಖಲೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯು ಆಸ್ತಿ ಮಾರಾಟವನ್ನು ಸುಗಮಗೊಳಿಸುತ್ತದೆ. ಆಸ್ತಿ ಸಂಬಂಧಿತ ವಿವಾದಗಳನ್ನು ಕಡಿಮೆ ಮಾಡುತ್ತದೆ ಮತ್ತು ಆಸ್ತಿ ತೆರಿಗೆ ಸಂಗ್ರಹವನ್ನು ಬೆಂಬಲಿಸುತ್ತದೆ. ಇಲ್ಲಿವರೆಗೆ ೩ ಲಕ್ಷ ೧೭ ಸಾವಿರಕ್ಕೂ ಹೆಚ್ಚು ಹಳ್ಳಿಗಳಲ್ಲಿ ಡ್ರೋನ್ ಮೂಲಕ ಆಸ್ತಿ ಸಮೀಕ್ಷೆ ಕಾರ್ಯ ಪೂರ್ಣಗೊಂಡಿದೆ. ೧ ಲಕ್ಷ ೫೦ ಸಾವಿರಕ್ಕೂ ಹೆಚ್ಚು ಹಳ್ಳಿಗಳಿಗೆ ಸುಮಾರು ೨ ಕೋಟಿ ೨೫ ಲಕ್ಷ ಆಸ್ತಿ ಕಾರ್ಡ್‌ಗಳನ್ನು ಸಿದ್ಧಪಡಿಸಲಾಗಿದೆ.

****************